RNU AIR DHARWAD

MARCH 29, 2026

# AKASHAVANI - DHARWAD

# PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**<u>ಪ್ರದೇಶ ಸಮಾಚಾರ</u>**

<><><>

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧದ ಪರಿಣಾಮವಾಗಿ, ಪ್ರಪಂಚದಾದ್ಯಂತ ಪೆಟ್ರೋಲ್ ಹಾಗೂ ಡೀಸೆಲ್ ಸಂಬಂಧಿಸಿದಂತೆ ಬಿಕ್ಕಟ್ಟಿನ ಪರಿಸ್ಥಿತಿ ಎದುರಾಗಿದೆ. ಭಾರತದ ರಾಜತಾಂತ್ರಿಕ ಸಂಬಂಧಗಳು, ವಿವಿಧ ರಾಷ್ಟ್ರಗಳಿಂದ ಭಾರತ ಪಡೆಯುತ್ತಿರುವ ಸಹಕಾರ ಹಾಗೂ ಕಳೆದ ಒಂದು ದಶಕದಲ್ಲಿ ನಿರ್ಮಿಸಿರುವ ರಾಷ್ಟ್ರೀಯ ಸಾಮರ್ಥ್ಯದಿಂದಾಗಿ, ದೇಶ ಬಿಕ್ಕಟ್ಟಿನ ಪರಿಸ್ಥಿತಿಯನ್ನು ದಿಟ್ಟತನದಿಂದ ಎದುರಿಸುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು. ಆಕಾಶವಾಣಿಯ ಜನಪ್ರಿಯ 'ಮನ ಕಿ ಬಾತ್' ಸರಣಿಯ, 132 ನೇ ಆವೃತ್ತಿಯಲ್ಲಿ ದೇಶ, ವಿದೇಶಗಳ ಭಾರತೀಯರನ್ನು ಉದ್ದೇಶಿಸಿ ಮಾತನಾಡಿದ ಅವರು, ಮಾರ್ಚ್ ತಿಂಗಳು ಜಾಗತಿಕ ಮಟ್ಟದಲ್ಲಿ ಅತೀವ ಪ್ರಕ್ಷುಬ್ಧತೆಯಿಂದ ಕೂಡಿದ ಕಾಲವಾಗಿದೆ. ಗಲ್ಫ್ ರಾಷ್ಟ್ರಗಳಲ್ಲಿ ಲಕ್ಷಾಂತರ ಜನ ಭಾರತೀಯರು ಇದ್ದು, ಕೆಲಸ ಮಾಡುತ್ತಿದ್ದಾರೆ. ಅಲ್ಲಿನ ಸರ್ಕಾರಗಳು ಭಾರತೀಯರಿಗೆ ಅಗತ್ಯವಾದ ಎಲ್ಲ ರೀತಿಯ ಸಹಾಯ, ಸಹಕಾರವನ್ನು ನೀಡುತ್ತಿದ್ದು, ಆ ರಾಷ್ಟ್ರಗಳಿಗೆ ಕೃತಜ್ಞರಾಗಿರುವುದಾಗಿ ತಿಳಿಸಿದರು.

<><><>

ನ್ಯಾಯ ವಿತರಣೆಯಲ್ಲಿ ಪೊಲೀಸರು ಯಾವುದೇ ಕಾರಣಕ್ಕೂ ರಾಜಿಯಾಗಬಾರದು ಹಾಗೂ ರಾಜ್ಯವನ್ನು ಮಾದಕವಸ್ತು ಮುಕ್ತಗೊಳಿಸಲು ಕಟಿಬದ್ಧರಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು. ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿ ಆವರಣದಲ್ಲಿ, ಇಂದು ನಡೆದ 46ನೇ ತಂಡದಸಿವಿಲ್ ಪೊಲೀಸ್ ಉಪ ನಿರೀಕ್ಷಕರ, ಪಿ.ಎಸ್.ಐ ನಿರ್ಗಮನ ಪಥ ಸಂಚಲನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಕಳೆದ ಮೂರು ವ ೕಗಳಲ್ಲಿ ಖಾಲಿ ಇದ್ದ 4 ಸಾವಿರದ 11 ಪಿಎಸ್ಐ ಹುದ್ದೆಗಳನ್ನು ಯಶಸ್ವಿಯಾಗಿ ಭರ್ತಿ ಮಾಡಲಾಗಿದೆ. ಬಜೆಟ್‌ನಲ್ಲಿ ಘೋಷಿಸಿದಂತೆ ಇನ್ನುಳಿದ 8,000 ಹುದ್ದೆಗಳನ್ನು ಶೀಘ್ರವೇ ಭರ್ತಿ ಮಾಡಲಾಗುವುದು ಎಂದರು. ಈ ಸಂದರ್ಭದಲ್ಲಿ ತರಬೇತಿ ಪೂರೈಸಿದ 377 ಹೊಸ ಸಬ್ ಇನ್ಸಪೆಕ್ಟರ್‌ಗಳು ಅಧಿಕೃತವಾಗಿ ಸೇವೆಗೆ ಸೇರ್ಪಡೆಗೊಂಡರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>